ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

# ಪುರಾತನ ಕಲ್ಯಾಣಿಗೆ ಮರುಜೀವ ನೀಡಿದ ಗದಗದ ಲಕ್ಕುಂಡಿಯ ಗ್ರಾಮಸ್ಥರು

ಗದಗ ಜಿಲ್ಲೆಯ ಲಕ್ಕುಂಡಿ ಗ್ರಾಮವು ಚಾಲುಕ್ಯರು, ಕಲಚೂರಿಗಳು, ಸೀನಾ ಮತ್ತು ಹೊಯ್ಸಳರ ಆಳ್ವಿಕೆಯಲ್ಲಿ ನಿರ್ಮಿಸಲಾದ ದೇವಾಲಯ, ಕ್ಯಾಣಿಗಳಿಗೆ ಹೆಸರುವಾಸಿಯಾದ ಸ್ಥಳವಾಗಿದೆ. ಲಕ್ಕುಂಡಿ ಗ್ರಾಮ ಪಂಚಾಯಿತಿಯು ಗದಗ ಜಿಲ್ಲಾ ಕೇಂದ್ರದಿಂದ 11ಕಿಮೀ ದೂರದಲ್ಲಿದ್ದು, ಇದರ ವ್ಯಾಪ್ತಿಯಲ್ಲಿ ಒಂದು ಗ್ರಾಮವಿದೆ. 2024 ರಲ್ಲಿ ಈ ಗ್ರಾಮದ ಜನಸಂಖ್ಯೆ 15,070 ಎಂದು ಅಂದಾಜಿಸಲಾಗಿದ್ದು, ಈ ಪೈಕಿ 6021 ಪುರುಷರು ಮತ್ತು 5939 ಮಹಿಳೆಯರಿದ್ದಾರೆ. ಈ ಗ್ರಾಮವು 2536 ಮನೆಗಳನ್ನು ಒಳಗೊಂಡಿದೆ. ಇಲ್ಲಿ ಬಹುತೇಕ ಜನರು ಕೃಷಿಯನ್ನು ಅವಲಂಬಿಸಿದ್ದಾರೆ.

ಲಕ್ಕುಂಡಿಯು ಕರ್ನಾಟಕದ ಇತಿಹಾಸದಲ್ಲಿ ತನ್ನದೇ ಆದ ಐತಿಹ್ಯವನ್ನು ಹೊಂದಿದ್ದು, ಶಾಸನಗಳ ಪ್ರಕಾರ ಲಕ್ಕುಂಡಿ ಗ್ರಾಮವನ್ನು ಮೊದಲು 'ಲೊಕ್ಕುಗುಂಡಿ' ಮತ್ತು 'ಲೋಕಿ ಗುಂಡಿ' ಎಂದು ಕರೆಯುತ್ತಿದ್ದರು. ಇಲ್ಲಿ 50 ಕ್ಕೂ ಹೆಚ್ಚು ಪ್ರಾಚೀನ ದೇವಾಲಯಗಳು ಇದ್ದು ಹಲವು ಕಲ್ಯಾಣಿಗಳೂ ಸಹ ಇವೆ. ಈ ಐತಿಹಾಸಿಕ ಕಲ್ಯಾಣಿಗಳಲ್ಲಿ ಬಹಳಷ್ಟು ಕಲ್ಯಾಣಿಗಳು ಜನರ ಮತ್ತು ಆಡಳಿತದ ನಿರ್ಲಕ್ಷ್ಯಕ್ಕೆ ಒಳಗಾಗಿ ಪಾಳು ಬಿದ್ದಿವೆ. ಇದನ್ನು ಗಮನಿಸಿದ ಗ್ರಾಮ ಪಂಚಾಯಿತಿಯವರು ಜಲ ಜೀವನ್ ಮಿಷನ್ ಮತ್ತು ಸ್ವಚ್ಛ ಭಾರತ್ ಮಿಷನ್ (ಗ್ರಾ) ಅಡಿಯಲ್ಲಿ ನಡೆಯುವ ಕಾರ್ಯಕ್ರಮಗಳ ಅಡಿಯಲ್ಲಿ ಪುನಶ್ಚೇತನ ಗೊಳಿಸಲು ಮುಂದಾದರು. ವೀರಭದ್ರೇಶ್ವರ ದೇವಸ್ಥಾನದ ಆವರಣದ ಕಲ್ಯಾಣಿಯು ಗ್ರಾಮ ಪಂಚಾಯಿತಿಯು ಆಯ್ಕೆಯಾಗಿತ್ತು.



ವೀರಭದ್ರೇಶ್ವರ ದೇವಸ್ಥಾನದ ಆವರಣದ ಕಲ್ಯಾಣಿಯು ಪ್ಲಾಸ್ಟಿಕ್ ಮತ್ತಿತರೆ ತ್ಯಾಜ್ಯ ವಸ್ತುಗಳಿಂದಾಗಿ ಮಲೀನಗೊಂಡಿತ್ತು. ಸ್ಥಳೀಯರ ನಿರ್ಲಕ್ಷ್ಯ, ಅರಿವಿನ ಕೊರತೆಯಿಂದ ಕಲ್ಯಾಣಿ ಸರಿಯಾಗಿ ನಿರ್ವಹಣೆ ಇಲ್ಲದೆ ತ್ಯಾಜ್ಯಗಳಿಂದ ತುಂಬಿತ್ತು. ಕಲ್ಯಾಣಿಗೆ ಕಸ ಎಸೆಯದಂತೆ ಪ್ರಾಥಮಿಕ ಹಂತದಲ್ಲಿ ಗ್ರಾಮ ಪಂಚಾಯಿತಿಯವರು ಮತ್ತು ಜಲ ಜೀವನ್ ಮಿಷನ್ ಜಿಲ್ಲಾ ಸಮಾಲೋಚಕರು ಮಾಹಿತಿ, ಶಿಕ್ಷಣ ಮತ್ತು ಸಂವಹನ ಚಟುವಟಿಕೆಯಡಿ ಜನರಲ್ಲಿ ಜಾಗೃತಿ ಮೂಡಿಸಿದರು. ಇದರಿಂದ ಹೆಚ್ಚಿನ ಬದಲಾವಣೆಯೇನು ಕಂಡುಬರದಾಗ, ಜಿಲ್ಲಾ ಸಮಾಲೋಚಕರು ಗ್ರಾಮ ಪಂಚಾಯಿತಿ ಚುನಾಯಿತ ಪ್ರತಿನಿಧಿಗಳು ಚರ್ಚಿಸಿ ಸೂಕ್ತ ಪರಿಹಾರ ಕಂಡುಕೊಳ್ಳಲು ಮುಂದಾದರು.

**ಪಾಲುದಾರರ/ ಭಾಗವಹಿಸುವಿಕೆ ಮತ್ತು ಬೆಂಬಲ ಕುರಿತು ವಿವರ :**

ಲಕ್ಕುಂಡಿ ಕಲ್ಯಾಣಿಯ ಪುನಶ್ಚೇತನ ಕಾರ್ಯಕ್ರಮಕ್ಕೆ ಗ್ರಾಪಂ ಅಭಿವೃದ್ಧಿ ಅಧಿಕಾರಿ ಮತ್ತು ಚುನಾಯಿತ ಪ್ರತಿನಿಧಿಗಳ ಸಭೆ ಸೇರಿಸಿ ಕಲ್ಯಾಣಿಯನ್ನು ಸ್ವಚ್ಛಗೊಳಿಸಲು ಕ್ರಮ ಕೈಗೊಳ್ಳುವಂತೆ ಸಮಾಲೋಚಕರು ವಿನಂತಿಸಿದರು. ಕಲ್ಯಾಣಿಯ ಮಹತ್ವವನ್ನು ಅರಿತ ಚುನಾಯಿತ ಪ್ರತಿನಿಧಿಗಳು ಐತಿಹಾಸಿಕವಾಗಿ ಗುರುತಿಸಿಕೊಂಡಿರುವ ಶ್ರೀ ಕೋಟೆ ವೀರಭದ್ರೇಶ್ವರ ದೇವಸ್ಥಾನದ ಕಲ್ಯಾಣಿಯನ್ನು ಪುನಶ್ಚೇತನಗೊಳಿಸಲು ಮುಂದಾದರು. ಸಭೆಯಲ್ಲಿ ಚರ್ಚಿಸಿದಂತೆ ಗ್ರಾಮದ ಸ್ವ-ಸಹಾಯ ಸಂಘದ ಮಹಿಳೆಯರು, ಗ್ರಾಮಸ್ಥರು ಮತ್ತು ಶಾಲಾ ಮಕ್ಕಳನ್ನು ಸೇರಿಸಿ ಶ್ರಮದಾನದ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ತೀರ್ಮಾನಿಸಿದರು. ಇದರಂತೆ ಎಲ್ಲರೂ ಶ್ರಮವಹಿಸಿ ಕಲ್ಯಾಣಿಯನ್ನು ಸ್ವಚ್ಛಗೊಳಿಸಿದರು.

ಗ್ರಾಮದ ಹಿರಿಯರು ಮತ್ತು ಗ್ರಾಮ ಪಂಚಾಯಿತಿಯ ಚುನಾಯಿತ ಪ್ರತಿನಿಧಿಗಳು ಕಲ್ಯಾಣಿಯ ಸ್ವಚ್ಛತೆಯನ್ನು ಕಾಪಾಡಿಕೊಳ್ಳಲು ನರೇಗಾ ಯೋಜನೆಯಡಿ ಕಾಲಕಾಲಕ್ಕೆ ಅಗತ್ಯ ಕ್ರಮವಹಿಸುವುದಾಗಿ ಶ್ರಮದಾನದ ನಂತರ ಏರ್ಪಡಿಸಿದ ಕಾರ್ಯಕ್ರಮದಲ್ಲಿ ತಿಳಿಸಿದ್ದಾರೆ. ಈ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿಯ ಅಧ್ಯಕ್ಷರು ಜನರನ್ನು ಉದ್ದೇಶಿಸಿ ಗ್ರಾಮಸ್ಥರು ಕಲ್ಯಾಣಿಗೆ ತ್ಯಾಜ್ಯ ವಸ್ತುಗಳನ್ನು ಹಾಕಬಾರದು ಮತ್ತು ಪಾಳು ಬಿಡದೆ ಸ್ವಚ್ಛತೆಯನ್ನು ಕಾಪಾಡಿಕೊಂಡು ಐತಿಹಾಸಿಕ ಕಲ್ಯಾಣಿಯನ್ನು ಉಳಿಸಿಕೊಳ್ಳಬೇಕೆಂದು ಮನವಿ ಮಾಡಿದ್ದಾರೆ.




**ಜಲಮೂಲಗಳನ್ನು ಸಂರಕ್ಷಿಸಿ,**
**ಜಲ ಕ್ಷಾಮವನ್ನು ನೀಗಿಸಿ**



ಮನೆ ಮನೆಗೆ ಗಂಗೆ ಜಲ ಜೀವನ್ ಮಿಷನ್

ಜಲೋತ್ಸವ

ಸ್ವಚ್ಛ ಸಂಕೀರ್ಣ

ಸ್ವಚ್ಛ ಭಾರತ — ಒಂದು ಹೆಜ್ಜೆ ಸ್ವಚ್ಛತೆಯ ಕಡೆಗೆ

8277506000
ಏಕೀಕೃತ ಸಹಾಯವಾಣಿ